## ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಾರ್ಯಾಲಯ, ಬಾಗಲಕೋಟ
## ಜಿಲ್ಲಾ ಆಡಳಿತ ಭವನ ರೂಮ್ ನಂ.132 ನವನಗರ ಬಾಗಲಕೋಟ

ಸಂಖ್ಯೆ:ಜಿ1:7226/3:ಹೊಖಾಪ್ರಾಶಾ:2015-16, 1246 ದಿನಾಂಕ: **18-04-2016**

ನಮೂನೆ-2
(ನಿಯಮ 3 ಉಪನಿಯಮ 5 (ಬಿ))

ಹಜಾರೆ ಫೌಂಡೇಶನ್ ರಬಕವಿ ತಾ:ಜಮಖಂಡಿ, ಈ ಆಡಳಿತ ಮಂಡಳಿಯವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ 1-1995) ಸೆಕ್ಷನ್ 30-31 ರಂತೆ ಈ ದಿನ ದಿನಾಂಕ: 18-04-2016 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಬಾಗಲಕೋಟ ಜಿಲ್ಲೆಯ ಜಮಖಂಡಿ ತಾಲೂಕಿನ ಹೊಸೂರ ಪಟ್ಟಣ:ಗ್ರಾಮದಲ್ಲಿ ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಜಿ.ಎಸ್.ಸಿ /ಆನ್ ಲೈನ್ ರ.ನಂ. ಸ್ವೀಕೃತಿ ರಸೀದಿ ಸಂಖ್ಯೆ ಹಾಗೂ ದಿನಾಂಕ : | ಇಡಿ-099-00002-61349 ದಿನಾಂಕ:31-10-2015 |
| 2. | ಕ್ರಮ ಸಂಖ್ಯೆ : | 63/2015-16 |
| 3. | ಪ್ರಾಥಮಿಕ ಶಾಲೆಯ ಹೆಸರು : | ಪದ್ಮಾವತಿ ಇಂಟರನ್ಯಾಶನಲ್ ಕನ್ನಡ ಹಿರಿಯ ಪ್ರಾಥಮಿಕ ಶಾಲೆ, ಹೊಸೂರ ತಾ:ಜಮಖಂಡಿ |
| 4. | ಶಿಕ್ಷಣ ಸಂಸ್ಥೆಯ ವರ್ಗೀಕರಣ : | ಪ್ರಾಥಮಿಕ ಶಿಕ್ಷಣ (ಸಹ ಶಿಕ್ಷಣ) |
| 5. | ಅನುಮತಿ ನೀಡಿದ ತರಗತಿ: | 6 ನೇ ತರಗತಿ : 2016-17 ನೇ ಸಾಲಿನಲ್ಲಿ.<br>7 ನೇ ತರಗತಿ : 2017-18 ನೇ ಸಾಲಿನಲ್ಲಿ.<br>8 ನೇ ತರಗತಿ : 2018-19 ನೇ ಸಾಲಿನಲ್ಲಿ. |
| 6. | ಅನುಮತಿ ನೀಡಿದ ಮಾಧ್ಯಮ : | ಕನ್ನಡ ಮಾಧ್ಯಮ (ಹಿರಿಯ ಪ್ರಾಥಮಿಕ ಶಾಲೆ) |
| 7. | ಶುಲ್ಕ ಪಾವತಿ ಮಾಡಿರುವುದು : | ದಿ. ಕರ್ನಾಟಕ ನಂ-592644 ರೂ 50,000=00<br>ನಂ-592643 ರೂ 20,000=00 ದಿನಾಂಕ:20-10-2015 ರನ್ವಯ ಪಾವತಿ ಮಾಡಿರುತ್ತಾರೆ |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 63/2015-16 ಪುಟ ಸಂಖ್ಯೆ: 19 ವಾಲ್ಯೂಮ ಸಂಖ್ಯೆ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ಪ್ರಮಾಣ ಪತ್ರವನ್ನು ಕರ್ನಾಟಕ ಶಿಕ್ಷಣ ಮಸೂದೆ 1983 ರಡಿ ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.

ಷರತ್ತುಗಳು:-

1. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ ಹಾಗೂ ನೋಂದಣಿ) ನಿಯಮಗಳು, 1997 ರ ನಿಯಮ 3, 4 ಮತ್ತು 5 ಕ್ಕೆ ಒಳಪಟ್ಟಿರುತ್ತದೆ.
2. **ಸರ್ಕಾರದ ಆದೇಶ ಸಂಖ್ಯೆ: ಇಡಿ 91 ಮಾಹಿತಿ 2012 ದಿನಾಂಕ: 15-11-2012 ರಂತೆ ಈ ನೋಂದಣಿಯು ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012 ಹಾಗೂ ಸದರಿ ಆದೇಶದಡಿಯಲ್ಲಿ ಕಾಲಕಾಲಕ್ಕೆ ಶಾಲಾ ಶಿಕ್ಷಣ ಪದ್ಧತಿಯ ಬದಲಾವಣೆ ಕುರಿತು ರೂಪಿಸಲಾಗುವ ನಿಯಮಗಳನ್ನು ಪಾಲನೆ ಮಾಡುವ ಷರತ್ತಿಗೆ ಒಳಪಟ್ಟಿರುತ್ತದೆ.**
3. ಸಂಸ್ಥೆಯ ಆಡಳಿತ ಮಂಡಳಿಯು ಮೇಲೆ ತಿಳಿಸಿರುವ ನಿಯಮಗಳಂತೆ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
4. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
5. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
6. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ, ಅದೇ ಸರ್ವೇ ನಂಬರ್‌ನಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
7. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
8. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆ್ಯಕ್ಟ ಸಂಖ್ಯೆ: 1:95) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಈ ಪ್ರಾಥಮಿಕ ಶಾಲೆ ನೋಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ:175:ಪಿ.ಎಂ.ಸಿ:95, ದಿನಾಂಕ: 7-9-98 ಮತ್ತು ದಿನಾಂಕ: 29-12-98 ರ ಪ್ರಕಾರ **ಶಾಶ್ವತ ಅನುದಾನ ರಹಿತವಾಗಿರುತ್ತದೆ.**
10. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ.20-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣಿಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
11. ಇಲಾಖೆ ಹಾಗೂ ಸರ್ಕಾರ ನಿಗದಿ ಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.
12. ಭಾಷಾ ನೀತಿ ಉಲ್ಲಂಘನೆ ಮಾಡಿದ ಶಾಲೆಗಳು ಸ್ವ ಇಚ್ಛೆ ಯೋಜನೆಯಡಿ ಅವಕಾಶ ಹೊಂದಿದ ಶಾಲೆಗಳು ನ್ಯಾಯಾಲಯದ ಆದೇಶ ಮತ್ತು ಸರ್ಕಾರದ ಆದೇಶ ಮಾರ್ಪಡಿಸಿದಲ್ಲಿ ಆ ಷರತ್ತಿಗೆ ಒಳಪಟ್ಟಿರುತ್ತವೆ.
13. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.
14. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ದಾಖಲಾತಿ 50 ಹಾಗೂ ಹಾಜರಾತಿ 40 ಇರತಕ್ಕದ್ದು.
15. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೊಂದಾಯಿಸಿದ ಎಲ್ಲ ಶಾಲೆಗಳು ರೆಕಗ್ನೇಷನ್ ಹಾಗೂ ಪ್ರಾವಿಜನಲ್ ರೆಕಗ್ನೇಷನ್ ವ್ಯಾಪ್ತಿಗೆ ಬರುವುದು.
16. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
17. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
18. ತರಗತಿಗಳನ್ನು ಪ್ರಾರಂಭಿಸಿದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು, ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗಿಯೇ ರದ್ದಾಗುವುದು.

19. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.
20. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ, ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುತಾಂದ ಅವಘಡಗಳಿಂದ ಸುರಕ್ಷಿತವಾಗಿರತಕ್ಕದ್ದು. ಮತ್ತು ನ್ಯಾಶನಲ್ ಬಿಲ್ಡಿಂಗ್ ಕೋಡ್ ಆಫ್ ಇಂಡಿಯಾ 2005 ರ ಪ್ರಕಾರ ಶಾಲಾ ಕಟ್ಟಡಗಳಲ್ಲಿ ಜಾಗೃತಿ ಕ್ರಮಗಳನ್ನು ತೆಗೆದುಕೊಳ್ಳಬೇಕು.
21. ಶಾಲೆಗಳಲ್ಲಿ ಅಗ್ನಿಶಾಮಕ ಯಂತ್ರ ಅಳವಡಿಸಿ ಎಲ್ಲ ಶಿಕ್ಷಕರಿಗೆ ಮತ್ತು ಇತರ ಸಿಬ್ಬಂದಿಗೆ ಅದರ ಉಪಯೋಗದ ಬಗ್ಗೆ ತರಬೇತಿ ನೀಡುವದು
22. ಸಿಬ್ಬಂದಿ ಮಾದರಿ ರಚನೆಯ ಪ್ರಕಾರ ಬೋಧಕ / ಬೋಧಕೇತರ ಸಿಬ್ಬಂದಿಗಳನ್ನು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅನುದಾನ ಇಲ್ಲದ ಪ್ರಾಥಮಿಕ ಮತ್ತು ಪ್ರಾಥಮಿಕ ಹಾಗೂ ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ನೌಕರರ ಕೆಲವು ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮಗಳು, 2005 ರನ್ವಯ ದೊರಕಿಸಬೇಕಾದ ಎಲ್ಲ ಸೇವಾ ಸೌಲಭ್ಯಗಳನ್ನು ಸಿಬ್ಬಂದಿಗಳಿಗೆ ಲಭ್ಯವಾಗುವಂತೆ ಮಾಡತಕ್ಕದ್ದು.
23. ಸರಕಾರದ ಆದೇಶ ಸಂಖ್ಯೆ: ಇಡಿ 104 ಎಸ್ ಇ ಪಿ 2005 ದಿನಾಂಕ: 12-01-2006 ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ತಿದ್ದುಪಡಿ ಆದೇಶಗಳ ಪ್ರಕಾರ ಶಾಲಾ ಶಿಕ್ಷಕರಿಗೆ ಸೇವಾ ಭದ್ರತೆ ಒದಗಿಸುವುದು, ಶಿಕ್ಷಕರ ಸೇವಾ ಪುಸ್ತಕ ನಿರ್ವಹಣೆ ಮಾಡುವುದು ಹಾಗೂ ನೇಮಕ ಮಾಡಿಕೊಂಡ ಶಿಕ್ಷಕರಿಗೆ ಕನಿಷ್ಟ ವೇತನ [ **ರೂ 12500/-**] ವನ್ನು ಬ್ಯಾಂಕ ಮೂಲಕ ಪಾವತಿಸತಕದ್ದು.
24. ಸರಕಾರದ ಆದೇಶ ಸಂಖ್ಯೆ: ಇಡಿ 104 ಎಸ್ ಇ ಪಿ 2005 ದಿನಾಂಕ:12-01-2006 ರಂತೆ ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಂತೆ, ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿನ ಹುದ್ದೆಗಳಿಗೂ ಕಡ್ಡಾಯವಾಗಿ ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ಅರ್ಹ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಕ ಮಾಡತಕ್ಕದ್ದು.
25. ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿ7[2]:ಪ್ರಾಶಿಅ:ಹೊಶಾಪ್ರಾ:ಅನು:1:2011-12 ದಿನಾಂಕ: 03-05-2012 ರಂತೆ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ಪ್ರಕಾರ 1 ರಿಂದ 5 ನೇ ತರಗತಿಯ ಪ್ರಾಥಮಿಕ ಶಾಲೆಗಳಲ್ಲಿ ಪಿಯುಸಿ, ಟಿಸಿಎಚ್/ಡಿಇಡಿ ವಿದ್ಯಾರ್ಹತೆಯ ಶಿಕ್ಷಕರನ್ನು ಹಾಗೂ 6, 7 ಮತ್ತು 8 ನೇ ತರಗತಿಗಳಿಗೆ ತರಬೇತಿ ಹೊಂದಿದ ಪದವೀಧರ ಶಿಕ್ಷಕರನ್ನು (ಟಿಜಿಟಿ) ಕಡ್ಡಾಯವಾಗಿ ನೇಮಕ ಮಾಡತಕ್ಕದ್ದು. [ಬಿಎ, ಬಿಇಡಿ/ಬಿಎಸ್‌ಸಿ, ಬಿಇಡಿ]
26. ನಿಯಮಾನುಸಾರ ಅನುಮತಿ ನೀಡಿದ ಮಾಧ್ಯಮಕ್ಕನುಗುಣವಾಗಿ ಅದೇ ಮಾಧ್ಯಮದ ಶಿಕ್ಷಕರನ್ನು ನೇಮಕ ಮಾಡಿಕೊಂಡಿದ್ದಲ್ಲಿ ಮಾತ್ರ ಶಾಲೆಯನ್ನು ಪ್ರಾರಂಭಿಸತಕ್ಕದ್ದು.
27. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.
28. ಪ್ರಾರಂಭಿಸಲು ಉದ್ದೇಶಿಸಿರುವ ಶಾಲೆಯು ಬಾಡಿಗೆ ಕಟ್ಟಡ ಹೊಂದಿದ್ದಲ್ಲಿ, ಶಾಲೆ ಪ್ರಾರಂಭಿಸಲು ಉದ್ದೇಶಿಸಿರುವ ಶಾಲಾ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳು ತೃಪ್ತಿಕರವಾಗಿರುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ದೃಢೀಕರಣ ಪಡೆದು ಶಾಲೆ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳುವುದು.
29. ಆಡಳಿತ ಮಂಡಳಿಯು ಕನಿಷ್ಟ ರೂ. 5 ಲಕ್ಷ ನಗದು ಠೇವಣಿ ಅಥವಾ ಸಮ ಮೊತ್ತದ ಸ್ಥಿರಾಸ್ತಿಯನ್ನು ಶಾಶ್ವತವಾಗಿ ಹೊಂದಿರತಕ್ಕದ್ದು.
30. ಶಾಲೆಯಲ್ಲಿ ಸಿ.ಸಿ.ಕ್ಯಾಮರಾವನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.
31. ಶಾಲೆಯಲ್ಲಿ ಗಂಡುಮಕ್ಕಳಿಗೆ 4 ಹಾಗೂ ಹೆಣ್ಣು ಮಕ್ಕಳಿಗೆ 4 ಪ್ರತ್ಯೇಕ ಶೌಚಾಲಯ ಹೊಂದಿರಬೇಕು.
32. ಪ್ರತಿ ಶಿಕ್ಷಣ ಸಂಸ್ಥೆ ಪ್ರತಿ ವರ್ಷ ಚಾರ್ಟರ್ಡ ಅಕೌಂಟೆಂಟ್‌ರಿಂದ ಪ್ರಮಾಣೀಕೃತ ಲೆಕ್ಕ ಪತ್ರಗಳನ್ನು ಹೊಂದಿರತಕ್ಕದ್ದು.
33. ಶಾಲೆಯು ವಿದ್ಯಾರ್ಥಿಗಳ ಪ್ರವೇಶಗಳ ನಿಬಂಧನೆಗಳು ಮತ್ತು ವಿದ್ಯಾರ್ಥಿಗಳ ಶುಲ್ಕ ವಸೂಲಾತಿ ಈ ಬಗ್ಗೆ ಇರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
34. ಶಾಲೆ ಮತ್ತು ಶಾಲಾ ಆವರಣ, ಶಾಲೆಗಳಲ್ಲಿಯ ಮಕ್ಕಳ ಪ್ರವೇಶ ದಾಖಲಾತಿಗಳು ಎಲ್ಲರಿಗೂ ಮುಕ್ತವಾಗಿರತಕ್ಕದ್ದು.
35. ಶಾಲಾ ಕಟ್ಟಡವು ಪರೀಕ್ಷೆಗಳು, ತರಬೇತಿ, ಜನಗಣತಿ ಇತ್ಯಾದಿ ಇಲಾಖಾ ಕಾರ್ಯಗಳಿಗೆ ಲಭ್ಯವಾಗಿರತಕ್ಕದ್ದು.
36. ಕರ್ನಾಟಕ ಶಿಕ್ಷಣ ಸಂಸ್ಥೆಗಳು [ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮಣ] ನಿಯಮಗಳು 1995 ರಲ್ಲಿ ತಿಳಿಸಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸತಕ್ಕದ್ದು.

37. ಸರಕಾರದ ಅಧಿಸೂಚನೆ ಸಂಖ್ಯೆ: ಇಡಿ 359 ಪಿಜಿಸಿ 2015 ಬೆಂಗಳೂರು ದಿನಾಂಕ:05-09-2015 ರನ್ವಯ ಕಿರಿಯ ಪ್ರಾಥಮಿಕ ಶಾಲೆಗೆ 18*20 ಅಡಿ ಅಳತೆಯ ಕನಿಷ್ಠ 05 ಕೊಠಡಿಗಳು, ಹಿರಿಯ ಪ್ರಾಥಮಿಕ ಶಾಲೆಗಳಿಗೆ 18*20 ಅಡಿ ಅಳತೆಯ ಕನಿಷ್ಠ 08 ಕೊಠಡಿಗಳನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು. ಈ ಕುರಿತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ದೃಢಪಡಿಸಿಕೊಂಡ ನಂತರವೇ ಪ್ರಥಮ ಮನ್ನಣೆ ಮಂಜೂರಾತಿಗೆ ಶಿಫಾರಸ್ಸು ಮಾಡುವದು.
38. ಶಾಲೆಯನ್ನು ಇಲಾಖೆಯ ಪೂರ್ವಾನುಮತಿ ಪಡೆಯದೇ ಬೇರೆ ಆಡಳಿತ ಮಂಡಳಿ/ಸಂಸ್ಥೆಗೆ ಪರಬಾರೆ ಮಾಡಕೂಡದು.
39. ನೋಂದಣಿ ಪ್ರಸ್ತಾವನೆಯೊಡನೆ ಸಲ್ಲಿಸಿದ ದಾಖಲೆಗಳು ಸತ್ಯಕ್ಕೆ ದೂರವಾದದ್ದೆಂದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಈ ನೋಂದಣಿ ರದ್ದುಪಡಿಸಲಾಗುವುದು.
40. ಸರಕಾರದ ಅಧಿಸೂಚನೆ ಸಂಖ್ಯೆ: ಇಡಿ 549 ಪಿಜಿಸಿ 2015 ಬೆಂಗಳೂರು ದಿನಾಂಕ:02-11-2015 ಆದೇಶದಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಮೇಲಿನ ಷರತ್ತುಗಳಿಗೊಳಪಟ್ಟು ಸದರಿ ಶಾಲೆಯನ್ನು ಶಾಶ್ವತ ಅನುದಾನರಹಿತ ಶಾಲೆಯೆಂದು 2016-17ನೇ ಸಾಲಿಗೆ ನೋಂದಾಯಿಸಲಾಗಿದೆ.

**(ಬಿ.ಹೆಚ್. ಗೋನಾಳ)**
ಉಪನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ, ಬಾಗಲಕೋಟ.

**ಗೆ,**

1. **ಚೇರಮನ್ನರು/ಕಾರ್ಯದರ್ಶಿಗಳು, ಹಜಾರೆ ಪೌಂಡೇಶನ್ ರಬಕವಿ ತಾ:ಜಮಖಂಡಿ**
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಜಮಖಂಡಿ, ಜಿ:ಬಾಗಲಕೋಟ
3. ಕಛೇರಿ ಪ್ರತಿ.

ಪ್ರತಿ ಗೌರವಪೂರ್ವಕವಾಗಿ ಮಾಹಿತಿಗಾಗಿ:

1. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
2. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ಬಾಗಲಕೋಟ